**ದಿನಾಂಕ 01-12-2025 ರಂದು ಸಾಕ್ಷಿಯನ್ನು ಕರೆಯಿಸಿ ಮುಖ್ಯ ವಿಚಾರಣೆಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃಃ**

ನಾನು ಈ ದಿನ ದಾಖಲಾತಿಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದು, ಅವುಗಳನ್ನು ನಾನು ನೋಡಿ ಗುರುತಿಸಿದ್ದು, ನಂತರ ಈ ಕೆಳಕಂಡಂತೆ ದಾಖಲಾತಿಗಳನ್ನು ಗುರುತಿಸಲಾಯಿತು.

ಸಾಕ್ಷಿಯು 4 ಅರ್ಜಿಗಳ ದೃಢಕೃತ ಪ್ರತಿಗಳನ್ನು ನೋಡಿ ಗುರುತಿಸಿದ್ದು , ಅವುಗಳನ್ನು ನಿಪಿ-1 ರಿಂದ 4 ಎಂದು, ಸಾಕ್ಷಿಯು ದಿ.26-10-2011 ರ ಪತ್ರದ ದೃಢೀಕೃತ ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-5 ಎಂದು, ಸಾಕ್ಷಿಯು ಅಜಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-6 ಎಂದು, ಸಾಕ್ಷಿಯು 2 ನಕ್ಷೆಗಳ ದೃಢೀಕೃತ ಪ್ರತಿಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-7 & 8 ಎಂದು, ಸಾಕ್ಷಿಯು ಕಾರ್ಯಾಲಯದ ಆದೇಶದ ಪ್ರತಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-9 ಎಂದು, ಸಾಕ್ಷಿಯು ಕೋರಿಕೆ ಯ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-10 ಎಂದು, ಸಾಕ್ಷಿಯು ಅರ್ಜಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯನ್ನು ಪುರಸ್ಕರಿಸಬೇಕೆಂದು ಕೋರಿರುತ್ತಾರೆ.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯಾವಕಾಶ ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು).

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಸಿಂಧನೂರು.**